ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

SP NEWS

ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume:05 ಸಂಪುಟ: 05 | Issue:180 ಸಂಚಿಕೆ: 180 | Date:08-08-2026 Saturday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ


## ಬಸವರಾಜ ಹೊರಟ್ಟಿ ಅವರು ತಮ್ಮ ಸ್ಥಾನಕ್ಕೆ ಘನತೆ ತುಂಬಿದವರು;

## ಆಗಸ್ಟ್ 14ಕ್ಕೆ ನೂತನ ಸಭಾಪತಿ ಆಯ್ಕೆ: ಸಿ.ಎಂ ಡಿ.ಕೆ ಶಿವಕುಮಾರ್



ಸೂರ್ಯಪ್ರಗತಿನ್ಯೂಸ್.ಕಾಂ

ಸಭಾಪತಿ ಹುದ್ದೆಯ ಗೌರವಕ್ಕಾಗಿ ನಿರ್ಧಾರ: ವಿಧಾನ ಪರಿಷತ್ತಿನಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷವು ಇತ್ತೀಚಿನ ಚುನಾವಣೆಗಳ ಬಳಿಕ ಸ್ಪಷ್ಟ ಬಹುಮತ ಗಳಿಸಿದ್ದು, ಸಭಾಪತಿಯವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಚಿಂತನೆ ನಡೆಸಿತ್ತು. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಂಪುಟದ ಪ್ರಮುಖ ನಾಯಕರು ಹೊರಟ್ಟಿ ಅವರನ್ನು ಭೇಟಿಯಾಗಿ, ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ವರಿಷ್ಠರ ನಿರ್ಧಾರವನ್ನು ತಿಳಿಸಿ ವಿನಂತಿಸಿದ್ದರು.

ಸದನದಲ್ಲಿ ಅವಿಶ್ವಾಸ ನಿರ್ಣಯ ಮಂಡನೆಯಾಗಿ ವೋಟಿಂಗ್ ನಡೆಯುವುದರಿಂದ ಸಭಾಪತಿ ಪೀಠದ ಘನತೆಗೆ ಧಕ್ಕೆಯಾಗಬಾರದು ಹಾಗೂ ಅನಗತ್ಯ ಮುಜುಗರವನ್ನು ತಪ್ಪಿಸಲು ಸ್ವಇಚ್ಛೆಯಿಂದ ಗೌರವಯುತವಾಗಿ ಹುದ್ದೆಯಿಂದ ಕೆಳಗಿಳಿಯಲು ತೀರ್ಮಾನಿಸಿರುವುದಾಗಿ ಅವರು ತಿಳಿಸಿದ್ದಾರೆ.

ಬಸವರಾಜ ಹೊರಟ್ಟಿ ಅವರ ಪ್ರತಿಕ್ರಿಯೆ:

"ನಾನು ಸುದೀರ್ಘ 46 ವರ್ಷಗಳ ರಾಜಕೀಯ ಜೀವನದಲ್ಲಿ 18 ಮುಖ್ಯಮಂತ್ರಿಗಳನ್ನು ಹಾಗೂ ಹಲವು ಸಭಾಪತಿಗಳನ್ನು ನೋಡಿದ್ದೇನೆ. ನನ್ನ ಆಡಳಿತಾವಧಿಯಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದೆ ಸದನವನ್ನು ಪಕ್ಷಾತೀತವಾಗಿ ನಡೆಸಿಕೊಂಡು ಬಂದಿದ್ದೇನೆ. ಸರ್ಕಾರದ ನಿರ್ಧಾರ ಹಾಗೂ ಪೀಠದ ಘನತೆಯನ್ನು ಎತ್ತಿಹಿಡಿಯುವ ಸಲುವಾಗಿ ಈ ರಾಜೀನಾಮೆ ನಿರ್ಧಾರಕ್ಕೆ ಬಂದಿದ್ದೇನೆ" ಎಂದು ಅವರು ತಮ್ಮ ನೋವನ್ನು ತೋಡಿಕೊಂಡಿದ್ದಾರೆ.

ಮುಂದಿನ ಆಗಸ್ಟ್ 14ರಂದು ನಡೆಯಲಿರುವ ಕಲಾಪದ ವೇಳೆ ಅವರು ಸದನ ಉದ್ದೇಶಿಸಿ ಮಾತುಗಳನ್ನಾಡಿ ಅಧಿಕೃತವಾಗಿ ನಿರ್ಗಮಿಸಲಿದ್ದು, ಹೊಸ ಸಭಾಪತಿ ಆಯ್ಕೆಗೆ ಹಾದಿ ಸುಗಮವಾಗಲಿದೆ.


ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ: 9901010109


## ಶಾಸಕಿ ರೂಪಕಲಾ ಶಶಿಧರ್ ಅವರಿಗೆ ಸಚಿವ ಸ್ಥಾನ; ಸಚಿವ ಮುನಿಯಪ್ಪ ಸ್ಪಷ್ಟನೆ



ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಅಸಮಾಧಾನಗೊಂಡಿರುವ ಶಾಸಕರು ಹಾಗೂ ನಾಯಕರನ್ನು ಸಮಾಧಾನಪಡಿಸಲು ಸಂಪುಟದಲ್ಲಿ ಕೆಲ ಸಣ್ಣ ಬದಲಾವಣೆ ಮಾಡುವ ಬಗ್ಗೆ ಕಾಂಗ್ರೆಸ್ ವಲಯದಲ್ಲಿ ಚಿಂತನೆ ಆರಂಭಗೊಂಡಿದೆ ಎನ್ನಲಾಗಿದೆ. ಅದರಲ್ಲೂ ಮುಖ್ಯವಾಗಿ ಕೆಎಚ್ ಮುನಿಯಪ್ಪ ಕೈಬಿಟ್ಟು ಪುತ್ರಿ ರೂಪಾಗೆ ಸಚಿವ ಸ್ಥಾನ ನೀಡಲಾಗುತ್ತೆ ಎನ್ನುವ ಸುದ್ದಿ ಹರಿದಾಡುತ್ತಿದೆ. ಹೀಗಾಗಿ ಈ ಬಗ್ಗೆ ಖುದ್ದು ಮುನಿಯಪ್ಪ ಸ್ಪಷ್ಟನೆ ಕೊಟ್ಟಿದ್ದಾರೆ.

ಸಂಪುಟ ಪುನಾರಚನೆ ಬೆನ್ನಲ್ಲೇ ಕರ್ನಾಟಕ ಕಾಂಗ್ರೆಸ್‌ನಲ್ಲಿ ಗೊಂದಲಗಳು ಉದ್ಭವಿಸಿವೆ. ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಕಲ್ಪಿಸುವ ಉದ್ದೇಶದಿಂದ ಸಚಿವ ಕೆ.ಎಚ್. ಮುನಿಯಪ್ಪ ಅವರ ಪುತ್ರಿ, ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಅವರಿಗೆ ಸಚಿವ ಸ್ಥಾನ ನೀಡುವ ಪ್ರಯತ್ನವೂ ನಡೆದಿದೆ ಎನ್ನುವ ಸುದ್ದಿ ಹರಿದಾಡುತ್ತಿದೆ. ಇದರ ಬೆನ್ನಲ್ಲೇ ಖುದ್ದು ಸಚಿವ ಕೆಎಚ್ ಮುನಿಯಪ್ಪ ಅವರು ಪ್ರತಿಕ್ರಿಯಿಸಿದ್ದು, ರೂಪಕಲಾ ಶಶಿಧರ್ ರವರಿಗೆ ಸಚಿವ ಸ್ಥಾನವನ್ನು ತ್ಯಾಗ ಮಾಡಲಿದ್ದಾರೆ ಎಂಬ ಸುದ್ದಿಗಳು ಕೆಲವು ದೃಶ್ಯ ಮಾಧ್ಯಮಗಳಲ್ಲಿ ಬರುತ್ತಿದೆ.ಈ ವರದಿಯು ಸತ್ಯಕ್ಕೆ ದೂರವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇಂದಿರಾ ಗಾಂಧಿ ಯವರ ಕಾಲದಿಂದ ಇಲ್ಲಿಯವರೆಗೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾಗಿ ಪಕ್ಷವನ್ನು ಕಟ್ಟುತ್ತಾ ಬಂದಿದ್ದಾರೆ. ಇಲ್ಲಿಯವರೆಗೂ ಕಾಂಗ್ರೆಸ್ ಪಕ್ಷಕ್ಕೆ ತಮ್ಮ ಕುಟುಂಬ ಸಮೇತ ನಿಷ್ಠೆಯನ್ನು ತೋರಿ, ಪಕ್ಷದ ಸಿದ್ಧಾಂತಗಳಿಗೆ ಬದ್ಧರಾಗಿದ್ದಾರೆ. ಕೋಲಾರ ಲೋಕಸಭಾ ಕ್ಷೇತ್ರದಿಂದ ಸತತವಾಗಿ 7 ಬಾರಿ ಸಂಸದರಾಗಿ ಆಯ್ಕೆಯಾಗಿದ್ದಾರೆ. ಕೇಂದ್ರದಲ್ಲಿ ಮೂರು ಬಾರಿ ಸಚಿವರಾಗಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಶಂಕರಾನಂದ ಹಾಗೂ ಜಾಫರ್ ಶರೀಫ್ ರವರ ನಂತರ ಮಾನ್ಯ ಕೆ.ಹೆಚ್. ಮುನಿಯಪ್ಪ ರವರ ದಾಖಲೆ ಜಯ ಐತಿಹಾಸಿಕವಾಗಿದೆ.

ದಕ್ಷಿಣ ಭಾರತದ ಬಾಬು ಜಗಜೀವನರಾಮ್ ಎಂದೇ ಖ್ಯಾತರಾಗಿರುವ ಕೆ.ಹೆಚ್. ಮುನಿಯಪ್ಪ ,ಪ್ರಸ್ತುತ ಆಹಾರ ಇಲಾಖೆಯನ್ನು ಉತ್ತಮವಾಗಿ ಮುನ್ನೆಡೆಸುತ್ತಿದ್ದು, ಸಮಾಜ ಕಲ್ಯಾಣ ಇಲಾಖೆ ಖಾತೆಯೊಂದಿಗೆ ಪರಿಶಿಷ್ಟ ಜಾತಿಯ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಖಾತೆ ಬದಲಾವಣೆಗಾಗಿ ಮಾನ್ಯ ಲೋಕಸಭಾ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿಯವರಿಗೆ ಬೇಡಿಕೆ ಇಟ್ಟಿದ್ದಾರೆ. ಸಕರಾತ್ಮ ಸ್ಪಂದನೆಯೊಂದಿಗೆ ಸಮಾಜ ಕಲ್ಯಾಣ ಖಾತೆ ನೀಡುವುದು ಬಹುತೇಕ ಖಚಿತವಾಗಿದೆ. ಮಾಧ್ಯಮಗಳಲ್ಲಿ ಇತ್ತೀಚೆಗೆ ಹರಿದಾಡುತ್ತಿರುವ ಸುದ್ಧಿಗಳು ನೈಜಕ್ಕೆ ದೂರವಾಗಿದ್ದು, ಅವುಗಳನ್ನು ಪರಿಗಣಿಸದಿರಲು ಈ ಮೂಲಕ ಕೋರುತ್ತೇವೆ ಎಂದು ಮಾಧ್ಯಮ ಪ್ರಕಟಣೆ ಮೂಲಕ ಸ್ಪಷ್ಟಪಡಿಸಿದ್ದಾರೆ.

## ಆ.13ರ ವರೆಗೆ ರಾಜ್ಯದಲ್ಲಿ ಮಳೆ;

### ಹವಾಮಾನ ಇಲಾಖೆಯಿಂದ ಮುನ್ನೆಚ್ಚರಿಕೆ



ಕರ್ನಾಟಕದ ಹಲವೆಡೆ ಮಳೆ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ಆಗಸ್ಟ್ 13ರ ವರೆಗೆ ವರ್ಷಧಾರೆಯಾಗಲಿದೆ. ಬೆಂಗಳೂರಿನಲ್ಲಿ 4 ದಿನ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ತಜ್ಞ ಸಿ. ಎಸ್. ಪಾಟೀಲ್ ತಿಳಿಸಿದ್ದಾರೆ. ಉಡುಪಿ, ಕೊಡಗು, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆ ಸಾಧ್ಯತೆ ಹಿನ್ನೆಲೆ, ಈ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಣೆ ಮಾಡಿರೋದಾಗಿ ಅವರು ಹೇಳಿದ್ದಾರೆ.

ಆಗಸ್ಟ್ 8ರಂದು ಉತ್ತರ ಒಳನಾಡಿನ ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಒಂದು ವಾರ ಭಾರೀ ಮಳೆ ಸಾಧ್ಯತೆ ಇದ್ದು, ಆಗಸ್ಟ್ 13ರ ವರೆಗೆ ಉತ್ತಮ ಮಳೆಯಾಗಲಿದೆ. ಬೆಂಗಳೂರಿಗೆ ಯಾವುದೇ ಅಲರ್ಟ್ ಇಲ್ಲ. ಹೀಗಿದ್ದರೂ ಹಗುರದಿಂದ ಸಾಧಾರಣ ಮಳೆ ಬೀಳಲಿದೆ ಎಂದು ಸಿಎಸ್ ಪಾಟೀಲ್ ಅವರು ತಿಳಿಸಿದ್ದಾರೆ.

## ಪರಿಷತ್ ಸಭಾಪತಿ ಸ್ಥಾನಕ್ಕೆ ಬಲವಂತವಾಗಿ ರಾಜೀನಾಮೆ ಕೊಡಿಸಿದ್ದಾರೆ



ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಪ್ರಮುಖ ಬೆಳವಣಿಗೆಯೊಂದರಲ್ಲಿ, ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ಅವರು ಶುಕ್ರವಾರ ರಾಜೀನಾಮೆ ನೀಡಿದ್ದಾರೆ. ಈ ವಿಚಾರವಾಗಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು 25 ಜನರ ತಂಡ ಕಟ್ಟಿಕೊಂಡು ಹೋಗಿ, ಗೂಂಡಾಗಿರಿ ಮಾಡಿ ಹೊರಟ್ಟಿ ಅವರಿಂದ ಬಲವಂತವಾಗಿ ರಾಜೀನಾಮೆ ಕೊಡಿಸಿದ್ದಾರೆ. ಕರ್ನಾಟಕಕ್ಕೆ ಇದು ದೊಡ್ಡ ಕಳಂಕ. ಈ ರೀತಿ ಘಟನೆ ರಾಜ್ಯ ರಾಜಕೀಯದಲ್ಲಿ ಹಿಂದೆ ಯಾವತ್ತೂ ನಡೆದಿಲ್ಲ. ಇದರ ವಿರುದ್ಧ ಹೋರಾಟ ನಡೆಸುವ ಬಗ್ಗೆ ಚರ್ಚೆ ಮಾಡುತ್ತೇವೆ ಎಂದು ಆರ್ ಅಶೋಕ್ ಅವರು ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಈ ಮೊದಲು ಮುಂಗಾರು ಅಧಿವೇಶನ ಆರಂಭವಾದ ಬಳಿಕ ಅಂದರೆ ಆಗಸ್ಟ್ 14 ರಂದು ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಲು ಬಸವರಾಜ ಹೊರಟ್ಟಿ ತೀರ್ಮಾನಿಸಿದ್ದರು. ಆದರೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಅವರ ಸುದೀರ್ಘ ಮನವೊಲಿಕೆಯ ಬಳಿಕ ಹೊರಟ್ಟಿ ಅವರು ಇಂದೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಅವರನ್ನು ಕಾಂಗ್ರೆಸ್ ಪಕ್ಷ ಮತ್ತು ಸಿಎಂ ಡಿಕೆ ಶಿವಕುಮಾರ್ ಅವರು ನಡೆಸಿಕೊಂಡ ರೀತಿ ರಾಜ್ಯದ ಪ್ರಜಾಪ್ರಭುತ್ವದ ಇತಿಹಾಸದಲ್ಲೇ ಅತ್ಯಂತ ಖಂಡನೀಯ ಮತ್ತು ಕಳವಳಕಾರಿ ಬೆಳವಣಿಗೆಯಾಗಿದೆ ಎಂದು ಅಶೋಕ್ ಅವರು ತಿಳಿಸಿದ್ದಾರೆ.

ಅಧಿಕಾರದ ಅಹಂಕಾರದಲ್ಲಿ ಕಾಂಗ್ರೆಸ್ ಸರ್ಕಾರ ಪ್ರಜಾಪ್ರಭುತ್ವದ ಸಂಪ್ರದಾಯಗಳನ್ನು ಒಂದೊಂದಾಗಿ ತುಳಿಯುತ್ತಿದೆ. ಯಾವುದೇ ಭಿನ್ನಾಭಿಪ್ರಾಯವನ್ನು ಚರ್ಚೆ, ಸಂವಾದ, ಮನವೊಲಿಕೆ ಮೂಲಕ ಬಗೆಹರಿಸುವ ಬದಲು ಬೆದರಿಕೆ ಮತ್ತು ಒತ್ತಡ ಮೂಲಕ ಪರಿಹರಿಸಲು ಹೊರಟಿರುವುದು ಕಾಂಗ್ರೆಸ್‌ನ ನಿಜವಾದ ರಾಜಕೀಯ ಸಂಸ್ಕೃತಿಯನ್ನು ಬಯಲಿಗೆಳೆದಿದೆ.

ಮಾತಿನಲ್ಲಿ ಸಂವಿಧಾನ, ಕೃತಿಯಲ್ಲಿ ಗೂಂಡಾಗಿರಿ ಎಂಬ ಕಾಂಗ್ರೆಸ್‌ನ ದ್ವಂದ್ವ ನಿಲುವು ಮತ್ತೊಮ್ಮೆ ರಾಜ್ಯದ ಜನತೆಯ ಮುಂದೆ ಬಯಲಾಗಿದೆ. ಎಂದು ವಾಗ್ದಾಳಿ ನಡೆಸಿದ್ದಾರೆ.

## ಬೈರಮಂಗಲದಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ವರೆಗೆ

## ಬೃಹತ್ ಪಾದಯಾತ್ರೆ; ನಿಖಿಲ್ ಕುಮಾರಸ್ವಾಮಿ

ಸೂರ್ಯಪ್ರಗತಿನ್ಯೂಸ್.ಕಾಂ




ರಾಮನಗರ: ಬಿಡದಿ ಟೌನ್‌ಶಿಪ್ ಯೋಜನೆಯನ್ನು ವಿರೋಧಿಸಿ ಜೆಡಿಎಸ್ ವತಿಯಿಂದ ಆಗಸ್ಟ್ 9, 10 ಮತ್ತು 11 ರಂದು ಬೈರಮಂಗಲದಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ವರೆಗೆ 38 ಕಿ.ಮೀ ಬೃಹತ್ ಪಾದಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.

, ಬೈರಮಂಗಲದಿಂದ ಫ್ರೀಡಂ ಪಾರ್ಕ್‌ವರೆಗೆ ರೈತರ ಜೊತೆ ಪಾದಯಾತ್ರೆ ಮಾಡುತ್ತೇವೆ. ಈ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸಲು ಪ್ರಯತ್ನ ಮಾಡುತ್ತಿದ್ದೇವೆ ಎಂದು ತಿಳಿಸಿದರು. ರೈತರು ಸಂಪೂರ್ಣವಾಗಿ ಈ ಟೌನ್‌ಶಿಪ್ ಯೋಜನೆಯನ್ನು ವಿರೋಧಿಸುತ್ತಿದ್ದಾರೆ. ಆದರೆ ಈ ಸರ್ಕಾರಕ್ಕೆ ಕಣ್ಣು ಕಾಣುತ್ತಿಲ್ಲ, ಕಿವಿಯೂ ಕೇಳುತ್ತಿಲ್ಲ. ರೈತರ ವಿರುದ್ಧ ಸರ್ಕಾರದ ನಡೆ ಇದೆ. ಹಾಗಾಗಿ ನಾವು ರೈತರ ಪರ ನಿಲ್ಲುವ ಕೆಲಸ ಮಾಡುತ್ತಿದ್ದೇವೆ ಎಂದು ನಿಖಿಲ್ ತಿಳಿಸಿದರು.

ಕಳೆದ ಜುಲೈ 30, 31 ಮತ್ತು ಆಗಸ್ಟ್ 1 ರಂದು ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು. ಆದರೆ ಅಜ್ಜಿ ಚೆನ್ನಮ್ಮ ಅವರ ಅಗಲಿಕೆ ದುಃಖದ ಹಿನ್ನೆಲೆಯಲ್ಲಿ ಪಾದಯಾತ್ರೆಯನ್ನು ಮುಂದೂಡಲಾಗಿತ್ತು, ಆದರೆ ಈಗ ಆಗಸ್ಟ್ 9 ರಿಂದ 11 ರವರೆಗೆ 3 ದಿನಗಳ ಕಾಲ ಪಾದಯಾತ್ರೆ ನಡೆಯಲಿದೆ ಎಂದು ಹೇಳಿದರು.




